ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡವರ ಕುರಿತು

ಶ್ರೀಎನ್. ರವಿಕುಮಾರ್(ವಿಧಾನ ಸಭೆಯಿಂದಚುನಾಯಿತರಾದವರು):-

409 (318) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಕಳೆದ 3 ವರ್ಷಗಳಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; ಅವರು ಯಾವ ಇಲಾಖೆಯಿಂದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡಿರುತ್ತಾರೆ ;

(ಆ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಕಳೆದ 3 ವರ್ಷಗಳಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಹೆಸರು ಮತ್ತು ವಿಳಾಸದೊಂದಿಗೆ ಮಾಹಿತಿ ನೀಡುವುದು ; ಅವರು ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಸಮಯದಲ್ಲಿ ಅವರ ಮತ್ತು ಕುಟುಂಬದವರ ಹೆಸರಿನಲ್ಲಿರುವ ಸ್ಥಿರಾಸ್ತಿ ಮತ್ತು ಚರಾಸ್ತಿಯ ಒಟ್ಟು ಮೌಲ್ಯ ಎಷ್ಟು ;

(ಇ) ಪ್ರಸ್ತುತ ವಿಲೀನಗೊಂಡವರ ಹೆಸರಿನಲ್ಲಿ ಮತ್ತು ಅವರ ಅವಲಂಬಿತರ ಹೆಸರಿನಲ್ಲಿ ಇರುವ ಸ್ಥಿರಾಸ್ತಿ ಮತ್ತು ಚರಾಸ್ತಿಯ ಒಟ್ಟು ಮೌಲ್ಯ ಎಷ್ಟು ; ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಮುನ್ನ ಮತ್ತು ವಿಲೀನದ ನಂತರ ಅವರ ಸ್ಥಿರಾಸ್ತಿ ಮತ್ತು ಚರಾಸ್ತಿಯಲ್ಲಿ ಎಷ್ಟು ಪ್ರಮಾಣದ ಹೆಚ್ಚಳವಾಗಿದೆ;

(ಈ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕಳೆದ 3 ವರ್ಷಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಭ್ರಷ್ಟಾಚಾರದ ಆರೋಪದಲಿ ಅಮಾನತ್ತುಗೊಂಡವರ ಸಂಖ್ಯೆ ಎಷ್ಟು ; ಇವರ ಮೇಲೆ ಇಲಾಖೆ ಯಾವ ಕ್ರಮಕೈಗೊಂಡಿದೆ ?